# ಕರ್ನಾಟಕ ಸರ್ಕಾರ
# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು
**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003**

**ಸಂಖ್ಯೆ: ಎ1/ವಿ.ಸ.ಪ/ಫ.ಪ್ರ/30/2021-22** **ದಿನಾಂಕ: 21/03/2022**

## ಸುತ್ತೋಲೆ

**ವಿಷಯ:** ಡಿಸೆಂಬರ್ 2021ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶ ಪ್ರಕಟಣೆ ಕುರಿತು.

*******

ಡಿಸೆಂಬರ್ 2021ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶವನ್ನು ಮಂಡಳಿಯ ವೆಬ್‌ಸೈಟ್ https://sslc.karnataka.gov.in ನಲ್ಲಿ **ದಿನಾಂಕ: 23/03/2022 ರಂದು ಪ್ರಕಟಿಸಲಾಗುವುದು ಹಾಗೂ** ಸದರಿ ಫಲಿತಾಂಶವನ್ನು **ಪರೀಕ್ಷಾ ಕೇಂದ್ರದ ಲಾಗಿನ್‌ನಲ್ಲಿ ದಿನಾಂಕ: 24/03/2022 ರಂದು ಲಭ್ಯಮಾಡಲಾಗುವುದು.** ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಫಲಿತಾಂಶ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು ತಮ್ಮ ಪರೀಕ್ಷಾ ಕೇಂದ್ರದ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಫಲಿತಾಂಶದಲ್ಲಿ ತಿದ್ದುಪಡಿ ಇದ್ದಲ್ಲಿ ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗಾಗಿ ಪರೀಕ್ಷಾ ಕೇಂದ್ರದ ಮೂಲಕ ಪ್ರಸ್ತಾವನೆ ಸಲ್ಲಿಸುವುದು. ಪ್ರಸ್ತಾವನೆಯನ್ನು ಪರಿಶೀಲಿಸಿ ನಿಯಮಾನುಸಾರ ಫಲಿತಾಂಶವನ್ನು ತಿದ್ದುಪಡಿ ಮಾಡಲು ಕ್ರಮವಹಿಸಲಾಗುವುದು.

ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗದಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| ಡಿಸೆಂಬರ್ 2021ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | **25/03/2022** |
| ಡಿಸೆಂಬರ್ 2021ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **05/04/2022** |
| ಡಿಸೆಂಬರ್ 2021ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | **26/03/2022** |
| ಡಿಸೆಂಬರ್ 2021ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **06/04/2022** |

ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು (ಥಿಯರಿ ಉತ್ತರ ಪತ್ರಿಕೆ ಮಾತ್ರ) ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್ ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆ ಅಥವಾ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಅಪೇಕ್ಷಿಸಿದಲ್ಲಿ ಮರುಎಣಿಕೆ/ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಪ್ರಾಯೋಗಿಕ ಪರೀಕ್ಷೆಗೆ ಸಂಬಂಧಿಸಿದಂತೆ ಮರುಎಣಿಕೆಗೆ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದೆ.

**ಸ್ಕ್ಯಾನ್‌ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಸಂಬಂಧ ಫ್ಲೋಚಾರ್ಟ್:**

https://sslc.karnataka.gov.in → Click on ONLINE SERVICES → Click on Other exams → Click on Photocopy, Retotaling, Revaluation → Click on Online Application for particular Exam → Click on Application form for Scanned Copy → Enter Exam Registration Number → View → Select Subjects for Scanned Copy → Enter Mobile Number → Enter e-mail ID → Enter Student Postal Address → SUBMIT → Challan Number will be displayed (Note down Challan number for future reference) → Click on Make payment → Select Online Payment → Select Online payment Banks (BILL DESK) → SUBMIT → pay Fee through Online → Print Acknowledgement

**ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು ಮಂಡಳಿಯ ಜಾಲತಾಣ ವಿಳಾಸ https://sslc.karnataka.gov.in ಇಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ವಿವರಗಳನ್ನು ಹಾಗೂ ಸ್ಕ್ಯಾನ್‌ಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 500/-ಗಳನ್ನು ಆನ್‌ಲೈನ್‌ನಲ್ಲಿಯೇ ಪಾವತಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಅಭ್ಯರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ಮಾಹಿತಿಯನ್ನು ರವಾನಿಸಲಾಗುವುದು. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಸಲ್ಲಿಸಬಹುದಾಗಿದೆ. ಅಂಕಗಳ ಮರುಎಣಿಕೆಗಾಗಿ ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 150/- ಅನ್ನು ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ. ಒಂದುವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ಶುಲ್ಕ ರೂ. 800/- ಅನ್ನು ಪಾವತಿಸಬೇಕಿರುತ್ತದೆ. ಒಂದು ವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ನಿಗಧಿತ ಶುಲ್ಕವನ್ನು ಅನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NET BANKING ಮೂಲಕ ಶುಲ್ಕ ಪಾವತಿಸಬಹುದಾಗಿದೆ.

**ಸ್ಕ್ಯಾನ್‌ಪ್ರತಿ ಮರುಎಣಿಕೆ ಹಾಗೂ ಮರುಮೌಲ್ಯಮಾಪನ ಅರ್ಜಿಗಳನ್ನು DownLoad ಮಾಡಿಕೊಳ್ಳುವ ಸಂಬಂಧ ಫ್ಲೋಚಾರ್ಟ್‌ನ್ನು ಮಂಡಳಿಯ ವೆಬ್ ಸೈಟ್‌ನಲ್ಲಿ ಲಭ್ಯಗೊಳಿಸಲಾಗಿದೆ.**

| ಶುಲ್ಕ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ.500/- (ಐದು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ.800/- (ಎಂಟು ನೂರು ರೂಪಾಯಿಗಳು) |
| ಉತ್ತರ ಪತ್ರಿಕೆಗಳ ಮರುಎಣಿಕೆ ಒಂದು ವಿಷಯಕ್ಕೆ ಶುಲ್ಕ | ರೂ.150/- (ನೂರ ಐವತ್ತು ರೂಪಾಯಿಗಳು) |

## ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು

**ಡಿಸೆಂಬರ್ 2021ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪರೀಕ್ಷಾ ಕೇಂದ್ರದ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಕೆಳಕಂಡ ಅಂಶಗಳ ಆಧಾರದ ಮೇಲೆ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ. ಹಾಗೂ ಯಾವುದೇ ಕಾರಣಕ್ಕೂ ಮಂಡಳಿಯಿಂದ ಫಲಿತಾಂಶ ಪಟ್ಟಿಯನ್ನು ಭೌತಿಕವಾಗಿ ಸಂಸ್ಥೆಗಳಿಗೆ ಕಳುಹಿಸಲಾಗುವುದಿಲ್ಲ.**

- ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಂದ ಪರೀಕ್ಷಾ ಮಂಡಳಿಗೆ ಪತ್ರ ವ್ಯವಹರಿಸುವ ಪ್ರತಿಯೊಂದು ಪತ್ರದ ಮುಖ ಪುಟದಲ್ಲಿ ತಮ್ಮ ಸಂಸ್ಥೆಗೆ ನೀಡಿರುವ ಶಾಲೆಯ ಸಂಕೇತ ಸಂಖ್ಯೆ ದೂರವಾಣಿ ಸಂಖ್ಯೆ ಮತ್ತು E-Mail ವಿಳಾಸ ವನ್ನು ತಪ್ಪದೇ ನಮೂದಿಸುವುದು.
- ಡಿಸೆಂಬರ್ 2021ರ ಮಾಹೆಯಲ್ಲಿ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು.

➢ ಒಂದು ವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.

➢ ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ **(ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ದೃಢೀಕೃತ ನಕಲು ಪ್ರತಿ) ರೂ. 200/-** ದಂಡ ಶುಲ್ಕವನ್ನು ಮಂಡಳಿಗೆ ಪಾವತಿಸಲಾಗಿರುವ Neft Challan ನ ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.

➢ ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಂದ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

[ಎಂ.ಆರ್. ಮಾರುತಿ]
ನಿರ್ದೇಶಕರು
ಇತರೆ ಪರೀಕ್ಷೆಗಳು

<u>ಇವರಿಗೆ:</u>

1. ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಮುಂದಿನ ಕ್ರಮಕ್ಕಾಗಿ,
2. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರುಗಳಿಗೆ ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಸಂಗೀತ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸುವುದು.
3. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ
4. ಕಛೇರಿ ಪ್ರತಿ